# AKKAMAHADEVI WOMEN'S UNIVERSITY, VIJAYAPURA

……………………………………………………………………

**DATE: 15-02-2018**

**ಪ್ರಕಟಣೆಯ ಕೃಪೆಗಾಗಿ…………**

ವಿಜಯಪುರ: ಜಾತಿ, ಮತ, ಲಿಂಗ ಭೇದವಿಲ್ಲದೇ ಎಲ್ಲ ಜನರಿಗೆ ಸಮಾನ ಅವಕಾಶ ಮತ್ತು ನ್ಯಾಯವನ್ನು ಒದಗಿಸುವುದೇ ನಿಜವಾದ ಅಭಿವೃದ್ಧಿ ಎಂದು ಮೈಸೂರು ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಪ್ರಾಧ್ಯಾಪಕ ಪ್ರೊ.ಬಿ.ಪಿ. ಮಹೇಶ್‌ಚಂದ್ರಗುರು ಅಭಿಪ್ರಾಯಪಟ್ಟರು.

ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಮಾಧ್ಯಮ ಮನೆ ಚಟುವಟಿಕೆಯ ಅಂಗವಾಗಿ ಇತ್ತೀಚೆಗೆ ಆಯೋಜಿಸಿದ್ದ 'ಅಭಿವೃದ್ಧಿ ಸಂವಹನದ ಸವಾಲುಗಳು ಮತ್ತು ಅವಕಾಶಗಳು' ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಭಿವೃದ್ಧಿ ಮಾನವೀಕರಣಗೊಳ್ಳಬೇಕು. ನಮ್ಮ ಮನೋಧರ್ಮ ಬದಲಾದಾಗ ಮಾತ್ರ ಪ್ರಗತಿ ಸಾಧ್ಯ. ಶ್ರೀಮಂತರು ಶ್ರೀಮಂತರೇ ಆಗುತ್ತಿದ್ದಾರೆ, ಬಡವರು ಇನ್ನೂ ಬಡವರಾಗುತ್ತಿದ್ದಾರೆ, ಇದೇ ಅಭಿವೃದ್ಧಿಯ ಸಂಘರ್ಷ ಎಂದು ಅವರು ವಿಷಾದ ವ್ಯಕ್ತಪಡಿಸಿದರು.

ನಮ್ಮ ಅಭಿವೃದ್ಧಿಯ ಶಿಲ್ಪಿಗಳು ನಾವೇ ಆಗಬೇಕು. ನಮ್ಮ ಸ್ವಂತ ಪರಿಶ್ರಮ ಹಾಗೂ ಹೋರಾಟದಿಂದಲೇ ಪ್ರಗತಿ ಸಾಧ್ಯ ಎಂದು ಅವರು ವಿದ್ಯಾರ್ಥಿನಿಯರಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿನಿಯರು ಹಾಗೂ ಮತ್ತಿತರರು ಉಪಸ್ಥಿತರಿದ್ದರು. ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥ ಪ್ರೊ.ಓಂಕಾರ ಕಾಕಡೆ ಸ್ವಾಗತಿಸಿ, ಪರಿಚಯಿಸಿದರು. ಭಾಗ್ಯಶ್ರೀ ಹಿಕ್ಕನಗುತ್ತಿ ನಿರೂಪಿಸಿದರು. ಈರಮ್ಮ ಜೂಕುರ ವಂದಿಸಿದರು.

**ಫೋಟೋ ಕ್ಯಾಪ್ಷನ್:**

1) **ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಮಾಧ್ಯಮ ಮನೆ ಚಟುವಟಿಕೆಯ ಅಂಗವಾಗಿ ಇತ್ತೀಚೆಗೆ ಆಯೋಜಿಸಿದ್ದ 'ಅಭಿವೃದ್ಧಿ ಸಂವಹನದ ಸವಾಲುಗಳು ಮತ್ತು ಅವಕಾಶಗಳು' ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮೈಸೂರು ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಪ್ರಾಧ್ಯಾಪಕ ಪ್ರೊ.ಬಿ.ಪಿ. ಮಹೇಶ್‌ಚಂದ್ರಗುರು ಮಾತನಾಡಿದರು.**


AKKAMAHADEVI WOMEN'S
UNIVERSITY, VIJAYAPURA
Department of Journalism and Mass Communication
Media House Activities
Special Lecture on
DEVELOPMENT
COMMUNICATION:
CHALLENGES AND OPPORTUNITIES
Chief Guest
Prof.B.P.Maheshchandra Guru
Profesor University of Mysore
Presided by
Prof. Onkar Kakade
Professor and Chairman
Dept. of JMC, AWU, Vijayapur
Venue: Department Lecture Hall :
Date: 14/02/2018
Time: 3.00pm